ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ ದಂ.ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ ನಂಬ್ರಃ **1732/2018**

ಸರ್ಕಾರದ ಪರವಾಗಿ
ಕೋಟಾ ಠಾಣಾ ಪೋಲಿಸರು --- ಪಿರ್ಯಾದಿದಾರರು

-ಮತ್ತು-

ಗಂಗಾಧರ ಉಡುಪ, 46 ವರ್ಷ,
ತಂದೆಃ ಲಕ್ಷ್ಮೀ ನಾರಾಯಣ ಉಡುಪ,
ವಾಸಃ ಕಾರ್ಸ್ಟ್ರೀಟ್, ಶಂಕರನಾರಾಯಣ ಗ್ರಾಮ,
ಕುಂದಾಪುರ ತಾಲೂಕು, ಉಡುಪಿ. --- ಆರೋಪಿ

ಃಆಪಾದನೆಃ

ಶ್ರೀಮತಿ ರೋಹಿಣಿ. ಡಿ. ಬಿ.ಎ., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ಆಪಾದನೆ ಏನೆಂದರೆಃ

ದಿನಾಂಕ 02-02-2018 ರಂದು ಸುಮಾರು 16.00 ಗಂಟೆಗೆ ಆರೋಪಿತರಾದ ನೀವು ನಿಮ್ಮ ಬಾಬ್ತು ಕೆಎ 20 ಜೆಡ್ 0762 ನೇ ನಂಬ್ರದ ಕಾರ್ ನ್ನು ಕುಂದಾಪುರ ತಾಲೂಕು ಹೊಂಬಾಡಿ ಗ್ರಾಮದ ಹುಣ್ಸೆಮಕ್ಕಿ ಎಂಬಲ್ಲಿರುವ ಅಜಿತ್ ಶೆಟ್ಟಿರವರ ಬಾಬ್ತು ಬೀಡಿ ಬ್ರಾಂಚ್ ಎದುರು ಕೋಟೇಶ್ವರ ಕಡೆಯಿಂದ ಬಿದ್ಕಲ್ ಕಟ್ಟೆ ಕಡೆಗೆ ಹಾದು ಹೋದ ಸಾರ್ವಜನಿಕ ತಾರು ರಸ್ತೆಯಲ್ಲಿ ಕೋಟೇಶ್ವರ ಕಡೆಯಿಂದ ಬಿದ್ಕಲ್ ಕಟ್ಟೆ ಕಡೆಗೆ ಮಾನವನ ಜೀವಕ್ಕೆ ಹಾನಿಯಾಗುವ ರೀತಿಯಲ್ಲಿ ಅತೀವೇಗ ಹಾಗೂ ಅಜಾಗರೂಕತೆಯಿಂದ ಸವಾರಿ ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 279 ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆಪಾದಿತರಾದ ನೀವು ಈ ಮೇಲೆ ತಿಳಿಸಿದ ನಿಮ್ಮ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಸವಾರಿ ಮಾಡಿಕೊಂಡು ಬಂದು ರಸ್ತೆಯ ತೀರಾ ಬಲಕ್ಕೆ ಚಲಾಯಿಸಿ ರಸ್ತೆಯ ದಕ್ಷಿಣ ಬದಿಯ ಮಣ್ಣಿನ ಕಚ್ಚಾ ರಸ್ತೆಯಲ್ಲಿ ಹುಣ್ಸೆಮಕ್ಕಿ ಮಾರ್ಕೆಟ್ ಕಡೆಯಿಂದ ಕೋಟೇಶ್ವರ ಕಡೆಗೆ ನಡೆದುಕೊಂಡು ಹೋಗುತ್ತಿದ್ದ ಸಂಕು ಪೂಜಾರ್ತಿ ರವರಿಗೆ ಎದುರಿನಿಂದ ಡಿಕ್ಕಿ ಹೊಡೆದ ಪರಿಣಾಮ ಅವರಿಗೆ ಬಲಕಾಲು, ಹೊಟ್ಟೆಯ ಭಾಗ ಮತ್ತು ತಲೆಗೆ ತೀವ್ರ ಸ್ವರೂಪದ ರಕ್ತ ಗಾಯ ಮತ್ತು ಒಳ ಜಖಂ ಉಂಟಾಗಿದ್ದು, ಅವರನ್ನು ಚಿಕಿತ್ಸೆಯ ಬಗ್ಗೆ ಕೋಟೇಶ್ವರ ಎನ್ ಆರ್ ಆಚಾರ್ಯ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು, ನಂತರ ವೈದ್ಯರ ಸಲಹೆಯಂತೆ ಹೆಚ್ಚಿನ ಚಿಕಿತ್ಸೆಯ ಬಗ್ಗೆ ಸಂಜೆ 7.55 ಗಂಟೆಗೆ ಮಣಿಪಾಲ ಕೆ ಎಂ ಸಿ ಆಸ್ಪತ್ರೆಗೆ ಕರೆದುಕೊಂಡು ಹೋದಾಗ ಪರೀಕ್ಷಿಸಿದ ವೈದ್ಯರು ಮೃತಪಟ್ಟಿದ್ದಾಗಿ ತಿಳಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 304 (ಎ)ರ ಕೆಳಗೆ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ)

ದಿನಾಂಕ ಃ 24.01.2024

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ., ಕುಂದಾಪುರ.

## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಕುಂದಾಪುರ

**ಸಿ.ಸಿ. ಸಂಖ್ಯೆ: 1732/2018**

**ಫಿರ್ಯಾದುದಾರರು: ಸರ್ಕಾರದ ಪರವಾಗಿ ಕೋಟ ಠಾಣಾ ಪೋಲೀಸರು,**

**- ವಿರುದ್ಧ -**

**ಆರೋಪಿಗಳು : ಗಂಗಾಧರ ಉಡುಪ, ತಂದೆ: ಲಕ್ಷ್ಮೀ ನಾರಾಯಣ ಉಡುಪ,**

1. ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನಾ ಸಾರಾಂಶವನ್ನು ಅರ್ಥಮಾಡಿಕೊಂಡಿರಾ?

ಉ.

2. ಅಪರಾಧವನ್ನು ಒಪ್ಪಿಕೊಳ್ಳುವಿರಾ ಅಥವಾ ನಿಮ್ಮ ಪರ ಪ್ರತಿರಕ್ಷೆ ಇದೆಯಾ?

ಉ.

ಮೇಲ್ಕಂಡ ಆಪಾದನಾ ಸಾರಾಂಶವನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢೀಕರಿಸುತ್ತೇನೆ.

**ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು,
ಜೆಎಂಎಫ್‌ಸಿ., **ಕುಂದಾಪುರ**